ಕರ್ನಾಟಕ ವಿಧಾನ ಪರಿಷತ್ತು

(1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 1419

(2) ಸದಸ್ಯರ ಹೆಸರು : ಶ್ರೀ ಘೋಟ್ನೆಕರ್ ಶ್ರೀಕಾಂತ ಲಕ್ಷಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

(3) ಉತ್ತರಿಸಬೇಕಾದ ದಿನಾಂಕ : ದಿನಾಂಕ: 19.03.2020

(4) ಉತ್ತರಿಸುವ ಸಚಿವರು : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.

ಪ್ರಶ್ನೆ		ಉತ್ತರ
(ಅ)	ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಲಯ ಸ್ಥಾಪಿಸಬೇಕು ಎಂದು ಅಗ್ರಹಿಸಿ ವಿವಿಧ ಸಂಘಟನೆಗಳ ಕಾರ್ಯಕರ್ತರು ದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)	ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಲಯ ಸ್ಥಾಪಿಸಬೇಕು ಎಂದು ಅಗ್ರಹಿಸಿ ವಿವಿಧ ಸಂಘಟನೆಗಳ ಕಾರ್ಯಕರ್ತರು ದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ಮಾಡಿರುವ ಬಗ್ಗೆ ಕಾನೂನು ಇಲಾಖೆಯಲ್ಲಿ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ.
(ಆ)	ಜೋಯಿಡಾ ತಾಲ್ಲೂಕಿಗೆ ಸಂಬಂಧಿಸಿದಂತೆ ಯಾವುದೇ ಸೌಲಭ್ಯಗಳು ನ್ಯಾಯಯುತವಾಗಿ ಸಿಗುತ್ತಿಲ್ಲವಾದ್ದರಿಂದ ಪ್ರತಿಯೊಂದು ಸೌಲಭ್ಯಗಳನ್ನು ಹೋರಾಟ ಮಾಡಿಯೇ ಪಡೆಯಬೇಕಾಗಿರುತ್ತದೆಯೆಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿರುವುದರಿಂದ ನ್ಯಾಯಾಲಯ ಸ್ಥಾಪಿಸುವ ಯೋಚನೆ ಸರ್ಕಾರದ ಮುಂದಿದೆಯೇ: (ವಿವರ ನೀಡುವುದು)	ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಲಯ ಸ್ಥಾಪಿಸುವ ಬಗ್ಗೆ ಪ್ರಸ್ತುತ ಸರ್ಕಾರದ ಮುಂದೆ ಪ್ರಸ್ತಾವನೆ ಇರುವುದಿಲ್ಲ. ಈ ಬಗ್ಗೆ ಪ್ರಸ್ತಾವನೆ ಬಂದಲ್ಲಿ, ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುವುದು.

ಸಂಖ್ಯೆ: ಲಾ/ ಎಲ್‌ಸಿಇ / 45 /2020

(ಜೆ.ಸಿ. ಮಾಧುಸ್ವಾಮಿ)
ಕಾನೂನು ಮತ್ತು ಸಂಸದೀಯ ವ್ಯವಹಾರಗಳು
ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು